## 2004ರ ಕರ್ನಾಟಕ ಅಧಿನಿಯಮ ಸಂಖ್ಯೆ 30

## ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ಅಧಿನಿಯಮ, 2004

## ಪ್ರಕರಣಗಳ ಪಟ್ಟಿ

**ಪ್ರಕರಣಗಳು**

1. ಸಂಕ್ಷಿಪ್ತ ಹೆಸರು
2. ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ 2004-2005ನೇ ಹಣಕಾಸು ವರ್ಷಕ್ಕಾಗಿ 73,36,58,000.00 ರೂಪಾಯಿಗಳ ನೀಡಿಕೆ
3. ಧನವಿನಿಯೋಗ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

2004-2005 ನೇ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ರಾಜ್ಯದ ಸಂಚಿತ ನಿಧಿಯೊಳಗಿನಿಂದ ವಿನಿಯೋಗಿಸಲು ಭಾರತ ಸಂವಿಧಾನದ 205ನೇ (1)(ಎ) ಅನುಚ್ಛೇದದ ಉಪಬಂಧಗಳಿಗನುಸಾರವಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

[2004ರ ವಿಧಾನ ಸಭೆಯ ವಿಧೇಯಕ ಸಂಖ್ಯೆ 23]

**2004ರ ಕರ್ನಾಟಕ ಅಧಿನಿಯಮ ಸಂಖ್ಯೆ 30**

(2004ರ ಆಗಸ್ಟ್ ಇಪ್ಪತ್ತನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ಅಧಿನಿಯಮ, 2004**

(2004ರ ಆಗಸ್ಟ್ ಹದಿನೆಂಟನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

2004-2005 ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಕೆಲವು ಅಧಿಕ ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡಲು ಒಂದು ಅಧಿನಿಯಮ.

2004-2005 ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಆ ಪೈಕಿಯಿಂದ ಕೆಲವು ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೈದನೆಯ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಕೆಳಕಂಡಂತೆ ಅಧಿನಿಯಮಿತವಾಗಲಿ, ಎಂದರೆ:-

1. **ಸಂಕ್ಷಿಪ್ತ ಹೆಸರು.-** ಈ ಅಧಿನಿಯಮವನ್ನು ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ಅಧಿನಿಯಮ, 2004 ಎಂದು ಕರೆಯತಕ್ಕದ್ದು.

2. **ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ 2004-2005ನೇ ಹಣಕಾಸು ವರ್ಷಕ್ಕಾಗಿ 73,36,58,000.00 ರೂಪಾಯಿಗಳ ನೀಡಿಕೆ.-** ಅನುಸೂಚಿಯ 2ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಲಾದ ಸೇವೆಗಳ ಸಂಬಂಧದಲ್ಲಿ, 2004-2005ನೇ ಭಾಗದ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿ ಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ಅನುಸೂಚಿಯ 5ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಲಾಗಿರುವ **ಎಪ್ಪತ್ತಮೂರು ಕೋಟಿ ಮೂವತ್ತಾರು ಲಕ್ಷದ ಐವತ್ತೆಂಟು ಸಾವಿರ ರೂಪಾಯಿಗಳಿಗೆ** ಮೀರದಷ್ಟು ಮೊಬಲಗನ್ನು ಮಾತ್ರ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡತಕ್ಕದ್ದು ಮತ್ತು ಉಪಯೋಗಿಸತಕ್ಕದ್ದು.

3. **ಧನವಿನಿಯೋಗ.-** ಈ ಅಧಿನಿಯಮದ ಮೂಲಕ, ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡಲು ಮತ್ತು ಉಪಯೋಗಿಸಲು ಅಧಿಕಾರ ನೀಡಲಾದ ಮೊತ್ತಗಳನ್ನು ಸದರಿ ವರ್ಷಕ್ಕೆ ಸಂಬಂಧಪಟ್ಟಂತೆ ಅನುಸೂಚಿಯಲ್ಲಿ ತಿಳಿಸಲಾದ ಸೇವೆಗಳು ಮತ್ತು ಉದ್ದೇಶಗಳಿಗಾಗಿ ವಿನಿಯೋಗಿಸತಕ್ಕದ್ದು.

ಕರ್ನಾಟಕ ರಾಜ್ಯ ಪತ್ರದ ಭಾಗ-IVಎ ವಿಶೇಷ ಪತ್ರಿಕೆ ಸಂಖ್ಯೆ: 905 ದಿನಾಂಕ: 20.8.2004 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 32 ಶಾಸನ 2004

**ಅನುಸೂಚಿ**

**(2 ಮತ್ತು 3ನೇ ಪ್ರಕರಣಗಳನ್ನು ನೋಡಿ)**

(ರೂ. ಲಕ್ಷಗಳಲ್ಲಿ)

| ಬೇಡಿಕೆ ಸಂಖ್ಯೆ | ಸೇವೆಗಳು ಮತ್ತು ಉದ್ದೇಶಗಳು | | ಮೀರದ ಮೊಬಲಗು | | ಒಟ್ಟು |
|---|---|---|---|---|---|
| | | | ವಿಧಾನಸಭೆಯಿಂದ ಪುರಸ್ಕೃತವಾದುದನ್ನು | ಸಂಚಿತ ನಿಧಿಯಿಂದ ಪ್ರಭೃತವಾದುದನ್ನು | |
| 01 | ಕೃಷಿ ಮತ್ತು ತೋಟಗಾರಿಕೆ | ರಾಜಸ್ವ | 25.00 | - | 25.00 |
| 02 | ಪಶುಸಂಗೋಪನೆ ಮತ್ತು ಮೀನುಗಾರಿಕೆ | ಬಂಡವಾಳ | 100.00 | - | 100.00 |
| 03 | ಆರ್ಥಿಕ | ರಾಜಸ್ವ | 524.79 | - | 524.79 |
| 05 | ಒಳಾಡಳಿತ ಮತ್ತು ಸಾರಿಗೆ | ರಾಜಸ್ವ | 200.00 | - | 200.00 |
| 07 | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ | ರಾಜಸ್ವ | 2091.10 | - | 2091.10 |
| 08 | ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ | ರಾಜಸ್ವ | 150.00 | - | 150.00 |
| 11 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ | ರಾಜಸ್ವ | 1691.72 | - | 1691.72 |
| 13 | ಆಹಾರ ಮತ್ತು ನಾಗರಿಕ ಸರಬರಾಜು | ರಾಜಸ್ವ | 500.00 | - | 500.00 |
| 14 | ಕಂದಾಯ | ರಾಜಸ್ವ | 249.83 | - | 249.83 |
| 17 | ಶಿಕ್ಷಣ | ರಾಜಸ್ವ | 500.00 | - | 500.00 |
| 18 | ವಾಣಿಜ್ಯ ಮತ್ತು ಕೈಗಾರಿಕೆ | ರಾಜಸ್ವ | 240.56 | - | 240.56 |
| 21 | ಜಲಸಂಪನ್ಮೂಲ | ಬಂಡವಾಳ | 247.58 | - | 247.58 |
| 23 | ಕಾರ್ಮಿಕ | ರಾಜಸ್ವ | 646.00 | - | 646.00 |
| 25 | ಕನ್ನಡ ಮತ್ತು ಸಂಸ್ಕೃತಿ | ರಾಜಸ್ವ | 85.00 | - | 85.00 |
| 26 | ಯೋಜನೆ, ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ | ರಾಜಸ್ವ | 35.00 | - | 35.00 |
| 27 | ಕಾನೂನು | ರಾಜಸ್ವ | 50.00 | - | 50.00 |
| | ಒಟ್ಟು | ರಾಜಸ್ವ<br>ಬಂಡವಾಳ | **6989.00**<br>**347.58** | **-** | **6989.00**<br>**347.58** |
| | ಒಟ್ಟು ಜುಮ್ಲಾ | | **7336.58** | **-** | **7336.58** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ. ದಕ್ಷಿಣಾಮೂರ್ತಿ,**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.